**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:-** ಶಿಶು ಕೇಂದ್ರೀಕೃತ ಯೋಜನೆಯಡಿ ರಾಜ್ಯ ಸಹಾಯಧನ ಪಡೆಯುತ್ತಿರುವ ಸ್ವಯಂಸೇವಾ ಸಂಸ್ಥೆಗಳಲ್ಲಿ ವಿಶೇಷ ಶಾಲೆಗಳ ಶಿಕ್ಷಕರುಗಳು ತರಬೇತಿ ಪಡೆಯಲು ಕಾಲಾವಕಾಶ ನೀಡುವ ಬಗ್ಗೆ.

**ಓದಲಾಗಿದೆ:-**
1) ಸರ್ಕಾರದ ಆದೇಶ ಸಂಖ್ಯೆ:ಮಮಇ/109/ಪಿಹೆಚ್‌ಪಿ2010, ದಿ:14.12.2010
2) ಸೇರ್ಪಡೆ ಆದೇಶ ಸಂಖ್ಯೆ: ಮಮಇ 109 ಪಿಹೆಚ್‌ಪಿ2010, ದಿ:29.12.2010
3) ಸರ್ಕಾರದ ಆದೇಶ ಸಂಖ್ಯೆ:ಮಮಇ 168 ಪಿಹೆಚ್‌ಪಿ 2012,ದಿ:28.06.2013
4) ನಿರ್ದೇಶಕರು,ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ವಿಹಿನಾಸಇ/ಸಿ೨/ಯೋಶಾ/ ವಿಶಾಅ/ 2012-13/6221, ದಿ:21.01.2014

**ಪ್ರಸ್ತಾವನೆ:**

ರಾಜ್ಯದಲ್ಲಿ ಸ್ವಯಂ ಸೇವಾ ಸಂಸ್ಥೆಗಳು ನಡೆಸುತ್ತಿರುವ **ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆಯನ್ನು** ರಾಜ್ಯ ಸಹಾಯಧನ ಯೋಜನೆ ಅಡಿ ಜಾರಿಗೊಳಿಸಲು ಮೇಲೆ ಕ್ರಮ ಸಂಖ್ಯೆ (1) ಮತ್ತು (2)ರಲ್ಲಿ ಓದಲಾದ ಆದೇಶಗಳಲ್ಲಿ ಮಾರ್ಗಸೂಚಿಗಳನ್ನು ರೂಪಿಸಲಾಗಿದೆ.

ಕೇಂದ್ರ ಸರ್ಕಾರದ ಸಹಾಯಧನ ಪಡೆದು, ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿರುವ 68 ವಿಶೇಷ ಶಾಲೆಗಳನ್ನು **ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆಗೆ** ಅಳವಡಿಸಿ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ:28.06.2013ರ ಆದೇಶದಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಈ 68 ವಿಶೇಷ ಶಾಲೆಗಳಲ್ಲಿ ನೇಮಕಗೊಂಡಿರುವ ಶೇಕಡ 90ರಷ್ಟು ಶಿಕ್ಷಕರು ವಿಶೇಷ ತರಬೇತಿ ಪಡೆದಿರುವುದಿಲ್ಲ. ಈ ಶಿಕ್ಷಕರುಗಳು ವಿಶೇಷ ಶಿಕ್ಷಣ ತರಬೇತಿ ಪಡೆದಲ್ಲಿ ಉತ್ತಮ ಶಿಕ್ಷಣ ನೀಡುವ ಸಾಧ್ಯತೆ ಇರುವುದರಿಂದ ಮತ್ತು ವಿಕಲ ಚೇತನ ಮಕ್ಕಳ ವಿಶೇಷ ತರಬೇತಿ ಪಡೆಯಲು 2 ವರ್ಷಗಳ ಕಾಲಾವಕಾಶ ನೀಡುವಂತೆ ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಮೇಲೆ ಕ್ರಮ ಸಂಖ್ಯೆ(4)ರಲ್ಲಿ ಓದಲಾದ ದಿನಾಂಕ:21.01.2014ರ ಪತ್ರದಲ್ಲಿ ಕೋರಿರುತ್ತಾರೆ.

ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಮುಂದಿನಂತೆ ಆದೇಶಿಸುತ್ತದೆ.

**ಸರ್ಕಾರದ ಆದೇಶ ಸಂಖ್ಯೆ:ಮಮಇ 314 ಪಿಹೆಚ್‌ಪಿ 2013(ಭಾಗ), ಬೆಂಗಳೂರು,**

**ದಿನಾಂಕ:21.02.2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಅಂಗವಿಕಲ ಮಕ್ಕಳ ವಿಶೇಷ ಶೈಕ್ಷಣಿಕ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ದೃಷ್ಟಿಯಿಂದ ವಿಕಲಚೇತನ ಮಕ್ಕಳ ವಿಶೇಷ

2...

ಶೈಕ್ಷಣಿಕ ಹಿತದೃಷ್ಟಿಯಿಂದ ಈ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳು ವಿಶೇಷ ತರಬೇತಿ ಪಡೆಯಲು 2013-14ನೇ ಸಾಲಿನಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ 2 ವರ್ಷಗಳ ಕಾಲಾವಕಾಶ ನೀಡಲು ಸರ್ಕಾರದ ಅನುಮತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಕೆ.ಜರಳಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ
ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
5. ಎಲ್ಲಾ ಜಿಲ್ಲಾಧಿಕಾರಿಗಳು/ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು (ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಮುಖಾಂತರ).
6. ಎಲ್ಲಾ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ/ ಎಲ್ಲಾ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು (ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಮುಖಾಂತರ).
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
8. ಸರ್ಕಾರದ ಉಪ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ:-

1. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.

ಕರ್ನಾಟಕ ಸರ್ಕಾರ

ಸಂಖ್ಯೆ: ಮಮಇ 314 ಪಿಹೆಚ್‌ಪಿ 2013(ಭಾಗ)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:26.02.2014.

## ತಿದ್ದುಪಡಿ

ಸರ್ಕಾರದ ಆದೇಶ ಸಂಖ್ಯೆ: ಮಮಇ 314 ಪಿಹೆಚ್‌ಪಿ 2013(ಭಾಗ) ದಿನಾಂಕ:21.02.2014ರ ಆದೇಶದ ಭಾಗದ 2ನೇ ಪ್ಯಾರಾದಲ್ಲಿ ಈ ಕೆಳಕಂಡಂತೆ ಸೇರಿಸಿ ಓದಿಕೊಳ್ಳತಕ್ಕದ್ದು.

1) 2013–14ನೇ ಸಾಲಿನಲ್ಲಿ ವಿಶೇಷ ತರಬೇತಿ ಪಡೆಯದ ಶಿಕ್ಷಕರನ್ನು ಹೊಂದಿರುವ ಸಂಸ್ಥೆಗಳಿಗೆ ನಿರ್ದೇಶಕರು ತಡೆಹಿಡಿದಿರುವ ಅನುದಾನವನ್ನು ಬಿಡುಗಡೆ ಮಾಡುವುದು;

2) 2014–15ನೇ ಶೈಕ್ಷಣಿಕ ವರ್ಷದಿಂದ ಶಿಕ್ಷಕರನ್ನು ತರಬೇತಿಗೆ ನಿಯೋಜಿಸಿದ ಅವಧಿಯಲ್ಲಿ ಟಿ.ಸಿ.ಎಚ್/ ಡಿ.ಎಡ್/ಬಿ.ಎಡ್ ಪದವಿ ಮತ್ತು ತರಬೇತಿ ಹೊಂದಿದ ಶಿಕ್ಷಕರನ್ನು ವಿಕಲಚೇತನ ಮಕ್ಕಳ ಅನುಪಾತಕ್ಕನುಸಾರವಾಗಿ, 1/3 ಭಾಗದಷ್ಟು ವಿಶೇಷ ಶಿಕ್ಷಕರಿರುವಂತೆ ನೇಮಿಸಿಕೊಳ್ಳುವ ಷರತ್ತಿಗೊಳಪಟ್ಟು ಸ್ವಯಂ ಸೇವಾ ಸಂಸ್ಥೆಗಳಿಂದ ಮುಚ್ಚಳಿಕೆ ಪಡೆದುಕೊಂಡು ಗೌರವಧನ ಪಾವತಿಸುವುದು;

ಕರ್ನಾಟಕ ರಾಜ್ಯ ಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಸರ್ಕಾರದ ಅಧೀನ ಕಾರ್ಯದರ್ಶಿ–2,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿ ಮತ್ತು ಹಿ ನಾ ಸ ಇಲಾಖೆ.
ದೂರವಾಣಿ ಸಂಖ್ಯೆ:22032240

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.

2...

4. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
5. ಎಲ್ಲಾ ಜಿಲ್ಲಾಧಿಕಾರಿಗಳು/ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು (ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಮುಖಾಂತರ).
6. ಎಲ್ಲಾ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ/ ಎಲ್ಲಾ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು (ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಮುಖಾಂತರ).
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
8. ಸರ್ಕಾರದ ಉಪ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ:-

1. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.